# ಕರ್ನಾಟಕ ಸರ್ಕಾರ
# (ಸಹಕಾರ ಇಲಾಖೆ)
## ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.

ಸಂಖ್ಯೆ:ಸಿಆರ್‌ಡಿ/ಸಿಎಬಿ-1/ 1/2013-14 ದಿನಾಂಕ:01 -09-2014

'ಸುತ್ತೋಲೆ'

**ವಿಷಯ:-** 2013-14 ನೇ ಸಾಲಿನಲ್ಲಿ ರಾಜ್ಯದ ರೈತರಿಗೆ ಪತ್ತಿನ ಸಹಕಾರಿ ಸಂಸ್ಥೆಗಳು ರಿಯಾಯಿತಿ ಬಡ್ಡಿ ದರದಲ್ಲಿ ವಿತರಿಸಿದ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳಿಗೆ ಬಡ್ಡಿ ಸಹಾಯಧನ ನಿಗದಿ ಪಡಿಸುವ ಬಗ್ಗೆ

**ಉಲ್ಲೇಖ:-** 1. ಸರ್ಕಾರದ ಆದೇಶ ಸಂಖ್ಯೆ ಸಿಒ 113 ಸಿಎಲ್‌ಎಸ್ 2013 ದಿ.10-10-2013
2. ಸರ್ಕಾರದ ಆದೇಶ ಸಂಖ್ಯೆ ಸಿಒ 200 ಸಿಎಲ್‌ಎಸ್ 2014 ದಿ.18-06-2014
3. ಸರ್ಕಾರದ ಆದೇಶ ಸಂಖ್ಯೆ ಸಿಒ 200 ಸಿಎಲ್‌ಎಸ್ 2014 ದಿ.07-06-2014

=====

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರ ಉಲ್ಲೇಖ(1)ರಲ್ಲಿ ರಾಜ್ಯದ ರೈತರಿಗೆ 2012-13 ಮತ್ತು 2013-14 ನೇ ಸಾಲಿಗೆ ರಾಜ್ಯದ ರೈತರಿಗೆ ಪತ್ತಿನ ಸಹಕಾರಿ ಸಂಸ್ಥೆಗಳು ರೂ.10.00 ಲಕ್ಷದವರೆಗಿನ ಸಂಪೂರ್ಣ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲವನ್ನು ಶೇ.3.00 ರ ಬಡ್ಡಿ ದರದಲ್ಲಿ ವಿತರಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿಲಾಗಿದ್ದು, ಅದರನ್ವಯ ಸಾಲ ವಿತರಿಸಿಲು ನಿರ್ದೇಶನ ನೀಡಲಾಗಿತ್ತು.

ಉಲ್ಲೇಖ (2) ರಲ್ಲಿ 2013-14 ನೇ ಸಾಲಿನಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ವಿತರಿಸಿದ ಮಧ್ಯಮಾವಧಿ ಕೃಷಿ ಸಾಲಗಳಿಗೆ ಶೇ.9.50 ಹಾಗೂ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಶಾಖೆಗಳ ಮೂಲಕ ವಿತರಿಸಿದ ಮಧ್ಯಮಾವಧಿ ಕೃಷಿ ಸಾಲಗಳಿಗೆ ಶೇ.8.50 ರ ಬಡ್ಡಿ ಸಹಾಯಧನದ ದರವನ್ನು ನಿಗದಿಪಡಿಸಲಾಗಿದೆ. ಮತ್ತು ಉಲ್ಲೇಖ (3) ರಲ್ಲಿ ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕು ಹಾಗೂ ಪಿಕಾರ್ಡ್ ಬ್ಯಾಂಕುಗಳು ವಿತರಿಸಿದ ದೀರ್ಘಾವಧಿ ಕೃಷಿ ಸಾಲಗಳಿಗೆ ಶೇ.10.50 ರ ಬಡ್ಡಿ ಸಹಾಯಧನದ ದರವನ್ನು ನಿಗದಿಪಡಿಸಿದ್ದು, ಅದರ ಪ್ರತಿಯನ್ನು ಲಗತ್ತು-1(ಅ) ಮತ್ತು (ಆ) ರಲ್ಲಿ ಈ ಪತ್ರಕ್ಕೆ ಲಗತ್ತಿಸಲಾಗಿದೆ.

2013-14 ನೇ ಸಾಲಿಗೆ ಸಂಬಂಧಿಸಿದ ಸಂಸ್ಥೆಗಳು ತಯಾರಿಸಬೇಕಾದ ಬಡ್ಡಿ ಸಹಾಯಧನದದ ಕ್ಲೇಮು ಬಿಲ್ಲುಗಳ ನಮೂನೆಗಳನ್ನು ಈ ಪತ್ರಕ್ಕೆ ಅನುಬಂಧ-1 ಹಾಗೂ ಅನುಬಂಧ-2 ರಲ್ಲಿ ಲಗತ್ತಿಸಲಾಗಿದ್ದು, ಪ್ರತೀ ತ್ರೈಮಾಸಿಕ ಮುಗಿದ ಒಂದು ತಿಂಗಳೊಳಗಾಗಿ ಕ್ಲೇಮು ಬಿಲ್ಲುಗಳನ್ನು ಸಮುಚಿತ ಮಾರ್ಗದ ಮೂಲಕ ಈ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

(ಡಾ॥ಎನ್.ಎಸ್.ಚನ್ನಪ್ಪಗೌಡ)
ಸಹಕಾರ ಸಂಘಗಳ ನಿಬಂಧಕರು
(ಕರ್ನಾಟಕ ರಾಜ್ಯ, ಬೆಂಗಳೂರು)

ಗೆ,

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ, ಬೆಂಗಳೂರು
3. ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ವ್ಯವಸ್ಥಾಪಕ ನಿರ್ದೇಶಕರು
4. ಎಲ್ಲಾ ಸಹಕಾರ ಸಂಘಗಳ ಜಂಟಿ ನಿಬಂಧಕರು
5. ಎಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು
6. ಎಲ್ಲಾ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಉಪ ನಿರ್ದೇಶಕರುಗಳು